ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಭ್ರಷ್ಟಾಚಾರ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯವಾಣಿ ದಿನಾಂಕ : DATE : 12/09/2019

ಎಚ್.ಡಿ.ರೇವಣ್ಣ ವಿರುದ್ಧ ಭ್ರಷ್ಟಾಚಾರ ಆರೋಪ

ವಿಶೇಷ ಸುದ್ದಿಪೋಷಕ ಬೆಂಗಳೂರು

ಕಾಂಗ್ರೆಸ್- ಜೆಡಿಎಸ್ ಮೈತ್ರಿ ಸರಕಾರದ ಅವಧಿಯಲ್ಲಿ ಲೋಕೋಪಯೋಗಿ ಸಚಿವರಾಗಿದ್ದ ಎಚ್.ಡಿ.ರೇವಣ್ಣ ಅವರಿಂದ ಎಲಿವೇಟೆಡ್ ಕಾರಿಡಾರ್ ಯೋಜನೆಗೆ ಸಂಬಂಧಿಸಿದಂತೆ 9,960 ಕೋಟಿ ರೂ. ಅಧಿಕಾರ ನಡೆದಿದೆ ಎಂದು ಬಿಜೆಪಿ ಮುಖಂಡ ಎಸ್.ಆರ್. ರಮೇಶ್ ಆರೋಪಿಸಿದ್ದಾರೆ.

ಈ ಕುರಿತು ಅವರು ಎಸ್‌ಜಿ ಹಾಗೂ ಪಿಎಂಒ ಕಚೇರಿಗೆ ಮೂರು ಪುಟಗಳ ದೂರು ಸಲ್ಲಿಸಿದ್ದು, ಪ್ರಕರಣವನ್ನು ಸಿಬಿಡಿ ತನಿಖೆಗೆ ವಹಿಸಬೇಕು ಎಂದು ಸರಕಾರಕ್ಕೆ ಒತ್ತಾಯಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, "ಮೈತ್ರಿ ಸರಕಾರದಲ್ಲಿ ಲೋಕೋಪಯೋಗಿ ಸಚಿವರಾಗಿದ್ದ ಎಚ್.ಡಿ.ರೇವಣ್ಣ ಬಿಎಂಎಸ್ ಅಭಿವೃದ್ಧಿ ಕಾರಿಗಳಾದ ರಜನೀಶ್ ಗೋಯಲ್, ಕೆ.ಪಿ.ಮೋಹನ್‌ರಾಜ್, ಲೋಕೋಪಯೋಗಿ ಇಲಾಖೆ ಕಾರ್ಯದರ್ಶಿ ಕೃಷ್ಣಾರೆಡ್ಡಿ ಕೆಆರ್‌ಡಿಸಿಎಲ್ ವ್ಯವಸ್ಥಾಪಕ ನಿರ್ದೇಶಕ ಜಿ.ಎಸ್.ಪ್ರಮಿಕುಮಾರ್ ವಿರುದ್ಧ ದೂರು ದಾಖಲಿಸಲಾಗಿದೆ. ಯೋಜನೆಯಲ್ಲಿ ಕೋಟ್ಯಂತರ ರೂಪಾಯಿ ಅಕ್ರಮ ನಡೆದಿರುವುದರ ವಿರುದ್ಧ ಸಾಮಾಜಿಕ ಹೋರಾಟಗಾರರೊಬ್ಬರು ನ್ಯಾಯಾಲಯದ ಮೊರೆ ಹೋಗಿದ್ದಾರೆ.



ಎಚ್.ಡಿ.ರೇವಣ್ಣ ವಿರುದ್ಧ ಭ್ರಷ್ಟಾಚಾರ ಆರೋಪ

» ಮೊದಲ ಪುಟದಿಂದ

ಪ್ರದರಿಂದಾಗಿ ಟೆಂಡರ್ ಪ್ರಕ್ರಿಯೆಗೆ ನ್ಯಾಯಾಲಯ ತಡೆ ನೀಡಿದೆ. ಯೋಜನೆಯ ಟೆಂಡರ್ ಪ್ರಕ್ರಿಯೆಯನ್ನು ಸರಕಾರವೇ ರದ್ದು ಮಾಡಬೇಕು," ಎಂದು ಆಗ್ರಹಿಸಿದರು.

"ನಗರದ ಸುತ್ತ ಇರುವ ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ ಹಾಗೂ ಪ್ರಮುಖ ಪತ್ತಗಳನ್ನು ಸಂಪರ್ಕಿಸುವ ಉದ್ದೇಶದಿಂದ 87 ಕಿ.ಮೀ. ಉದ್ದದ ಎಲಿವೇಟೆಡ್ ಕಾರಿಡಾರ್ ಯೋಜನೆ ರೂಪಿಸಲಾಗಿದೆ. ಯೋಜನೆಯ ಬಗ್ಗೆ ಮೊದಲು ಚರ್ಚೆಯಾದಾಗ 17 ಸಾವಿರ ಕೋಟಿ ರೂ. ವೆಚ್ಚವೆಂದು ಅಂದಾಜಿಸಲಾಗಿತ್ತು. ನಂತರ ಮೊತ್ತವನ್ನು ಏಕಾಏಕಿ 26,960 ಕೋಟಿ ರೂ.ಗೆ ಏರಿಸಲಾಯಿತು. ಆಗ ಸಚಿವರಾಗಿದ್ದ ರೇವಣ್ಣ ಅವರ ಸೂಚನೆ ಮೇರೆಗೆ ಮೊತ್ತವನ್ನು ಹೆಚ್ಚಿಸಲಾಗಿದೆ ಎಂದು ತಿಳಿದುಬಂದಿದೆ," ಎಂದರು.

"ಅಂದಾಜು ಮೊತ್ತವನ್ನು ಹೆಚ್ಚಳ ಮಾಡಿದ್ದರಿಂದ ಒಟ್ಟು ಮೊತ್ತದಲ್ಲಿ ಶೇ.59 ರಷ್ಟು ಏರಿಕೆ ಕಂಡುಬಂದಿದೆ. ಮೊದಲಿಗೆ ಭೂ ಸ್ವಾಧೀನಕ್ಕೆ 193 ಕೋಟಿ ರೂ. ಖರ್ಚಾಗಬಹುದು ಎನ್ನಲಾಗಿತ್ತು. ನಂತರ ಸಚಿವರ ಸೂಚನೆಯಿಂದಾಗಿ 306 ಕೋಟಿ ರೂ.ಗೆ ಹೆಚ್ಚಿಸಲಾಯಿತು. ರೇವಣ್ಣ ಅವರು ಹಾಸನ, ತುಮಕೂರು ಹಾಗೂ ಮಂಡ್ಯ ಕ್ಷೇತ್ರಗಳ ಲೋಕಸಭಾ ಚುನಾವಣೆಗೆ ಹಣ ಸಂಗ್ರಹಿಸಲು ಈ ಯೋಜನೆಯನ್ನು ಬಳಸಿಕೊಂಡಿದ್ದಾರೆ. ತಾವು ಹೇಳಿದಂತೆ ಕೇಳುವ ಸಂಸ್ಥೆಗೆ ಗುತ್ತಿಗೆ ಸಿಗುವಂತೆ ಪ್ರಯತ್ನ ಮಾಡಿದ್ದಾರೆ. ಇದಕ್ಕೆ ಇಲಾಖೆಯ ಅಧಿಕಾರಿಗಳು ಸಹಾಯ ಮಾಡಿದ್ದಾರೆ," ಎಂದು ಆರೋಪಿಸಿದರು.